ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು - ೧೫

**ಪಟ್ಟಿ - ೧೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**
**(ಮುಂದುವರೆದ ಉಪವೇಶನ)**
**ಶುಕ್ರವಾರ, ದಿನಾಂಕ: ೨೪ನೇ ಮಾರ್ಚ್, ೨೦೧೭**

---

## ಸಮೂಹ - V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ಉನ್ನತ ಶಿಕ್ಷಣ ಸಚಿವರು

೪. ವಸತಿ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು

೭. ಸಾರಿಗೆ ಸಚಿವರು

೮. ಗಣಿ ಮತ್ತು ಭೂವಿಜ್ಞಾನ ಸಚಿವರು

---

## ಬೀದರ್ ಜಿಲ್ಲೆಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಕಾಮಗಾರಿಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -**

೧೫೧ (೧೫೨೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ತಾಲ್ಲೂಕುಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮಂಜೂರಾಗಿರುವ ಕಾಮಗಾರಿಗಳು ಯಾವುವು ; ಮಂಜೂರಾತಿ ನೀಡಿದ್ದು ಯಾವಾಗ ; (ಕಾಮಗಾರಿವಾರು ಅಂದಾಜು ವೆಚ್ಚದೊಂದಿಗೆ ವಿವರ ನೀಡುವುದು)

(ಆ) ಇಲ್ಲಿಯವರೆಗೆ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; (ಕಾಮಗಾರಿಗಳ ವಿವರ ನೀಡುವುದು)

(ಇ) ೨೦೧೬–೨೦೧೭ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಖರ್ಚು ಮಾಡಿದ ಅಂದಾಜು ವೆಚ್ಚ ಎಷ್ಟು ? (ಮಾಹಿತಿ ನೀಡುವುದು)

## ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೨ (೧೪೪೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ನಮ್ಮ ಗ್ರಾಮ–ನಮ್ಮ ರಸ್ತೆ' (ಗಾಂಧಿ ಪಥ ಗ್ರಾಮ ಪಥ) ಯೋಜನೆ ಹಂತ–೪ರಲ್ಲಿ ಯಾವ ಯಾವ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಯೋಜನೆಯನ್ನು ರೂಪಿಸಲಾಗಿದೆ ;

(ಆ) ಯಾವ ಯಾವ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಎಷ್ಟು ಕಿ.ಮೀ. ರಸ್ತೆಯನ್ನು ಈ ಯೋಜನೆಯಡಿ ಅಭಿವೃದ್ಧಿಪಡಿಸಲಾಗಿದೆ ;

(ಇ) ಇದರಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಜನಸಾಂದ್ರತೆ ಹೆಚ್ಚಾಗಿರುವ ಎಷ್ಟು ಗ್ರಾಮಗಳ ರಸ್ತೆ ನಿರ್ಮಾಣಗೊಂಡಿದೆ ; ಎಷ್ಟು ಕಿ.ಮೀ. ರಸ್ತೆ ನಿರ್ಮಾಣವಾಗಿದೆ ?

## ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಕಲಿಕಾ ಮಟ್ಟ ತೀವ್ರವಾಗಿ ಕುಸಿಯುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೩ (೧೬೦೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳ ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಕಲಿಕಾ ಮಟ್ಟ ತೀವ್ರ ಕುಸಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗ್ರಾಮೀಣ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಏನೇನು ಕ್ರಮಗಳನ್ನು ಕೈಗೊಂಡಿದೆ ; ಸರ್ಕಾರ ಹಮ್ಮಿಕೊಂಡ ಯೋಜನೆಗಳಾವುವು ;

(ಇ) ಗ್ರಾಮೀಣ ಶಾಲೆಗಳ ಶಿಕ್ಷಕರ ಬೋಧನಾ ಸಾಮರ್ಥ್ಯವನ್ನು ಕಾಲಕಾಲಕ್ಕೆ ಉನ್ನತೀಕರಿಸಲು ಸರ್ಕಾರ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ; ಎಲ್ಲಾ ಶಿಕ್ಷಕರು ಸದರಿ ಕಾರ್ಯಕ್ರಮಗಳಲ್ಲಿ ಭಾಗಿಯಾಗುತ್ತಿದ್ದಾರೆಯೇ ; ಎಷ್ಟು ಪ್ರಮಾಣದಲ್ಲಿ ಶಿಕ್ಷಕರನ್ನು ಉನ್ನತೀಕರಿಸಲಾಗಿದೆ ; ಇದಕ್ಕಾಗಿ ಸರ್ಕಾರ ಖರ್ಚು ಮಾಡಿದ ಅನುದಾನವೆಷ್ಟು ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ಗ್ರಾಮೀಣ ಪ್ರದೇಶಗಳ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯವನ್ನು ಸುಧಾರಿಸಲಾಗುವುದು ?

**ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ನಡೆದ ಅವ್ಯವಹಾರಗಳ ಬಗ್ಗೆ**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೫೪ (೧೬.೨೨) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಆರ್ಥಿಕ ಅವ್ಯವಹಾರ ನಡೆದಿರುವುದು ನಿಜವೇ ;

(ಆ) ನಡೆದಿದ್ದಲ್ಲಿ, ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಅವ್ಯವಹಾರ ನಡೆದಿದೆ ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಇ) ಈ ಅವ್ಯವಹಾರಗಳಿಂದಾಗಿ ಸರ್ಕಾರಕ್ಕೆ ಹಾಗೂ ವಿಶ್ವವಿದ್ಯಾಲಯಗಳಿಗೆ ಆಗಿರುವ ಆರ್ಥಿಕ ಹಾನಿ ಎಷ್ಟು ;

(ಈ) ಈ ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಯಾರು ಯಾರು ?

(ಉ) ಅವ್ಯವಹಾರ ನಡೆಸಿದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಹಾಗೂ ಕೈಗೊಳ್ಳಲಿರುವ ಕ್ರಮಗಳೇನು ;

(ಊ) ಆರ್ಥಿಕ ಹಾನಿಯನ್ನು ಸಂಬಂಧಪಟ್ಟವರಿಂದ ಭರಿಸಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು ; ಇಲ್ಲಿಯವರೆಗೆ ಮರಳಿ ಪಡೆದ ಹಣ ಎಷ್ಟು ?

## ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ನಡೆದಿರುವ ಸಾವಿರಾರು ಕೋಟಿ ಅವ್ಯವಹಾರ ಕುರಿತು

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೫ (೧೪೮೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನಡೆದಿರುವ ಸಾವಿರಾರು ಕೋಟಿ ರೂ.ಗಳ ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿಗಳ ಬಗ್ಗೆ ಸರ್ಕಾರಕ್ಕೆ ವರದಿ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿಗಳು ಯಾರು ; (ವಿವರ ನೀಡುವುದು)

(ಇ) ಅವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕೈಗೊಳ್ಳದೆ ಇದ್ದಲ್ಲಿ, ಕಾರಣಗಳೇನು ?

## ಓಲಾ–ಉಬರ್ ಟ್ಯಾಕ್ಸಿಗಳಿಗೆ ನಿಗದಿಯಾಗಿರುವ ಕನಿಷ್ಠ ದರದ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೬ (೧೪೧೪) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರದಲ್ಲಿ ಆ್ಯಪ್ ಆಧಾರಿತ ಟ್ಯಾಕ್ಸಿ ಸೇವೆಗಳು ಯಾವುವು ; (ಹೆಸರುಗಳೊಂದಿಗೆ ವಿವರ ನೀಡುವುದು)

(ಆ) ಓಲಾ ಮತ್ತು ಉಬರ್ ಸೇರಿದಂತೆ ಆ್ಯಪ್ ಆಧಾರಿತ ಸೇವೆ ಕಲ್ಪಿಸುತ್ತಿರುವ ಟ್ಯಾಕ್ಸಿಗಳಿಗೂ ಪ್ರತಿ ಕಿ.ಮೀ.ಗೆ ಕನಿಷ್ಠ ದರ ಎಷ್ಟು ನಿಗದಿಪಡಿಸಲಾಗಿದೆ ;

(ಇ) ಸಾಮಾನ್ಯ ಟ್ಯಾಕ್ಸಿಗಳಿಗೆ ಸರ್ಕಾರ ನಿಗದಿಪಡಿಸಿರುವ ಕನಿಷ್ಠ ದರವೆಷ್ಟು ; (ಹವಾನಿಯಂತ್ರಿತ ರಹಿತ)

(ಈ) ಆ್ಯಪ್ ಆಧಾರಿತ ಟ್ಯಾಕ್ಸಿಗಳಲ್ಲಿ ನಿರ್ದಿಷ್ಟ, ಕನಿಷ್ಟ ದರ ನಿಗದಿಪಡಿಸದೇ ಪೈಪೋಟಿಗೆ ಬಂದಿರುವ ಖಾಸಗಿ ಕಂಪನಿಗಳಿಂದ ಟ್ಯಾಕ್ಸಿ ಚಾಲಕರಿಗೆ ವಾಹನ ವೆಚ್ಚ, ಡೀಸೆಲ್, ಗ್ರಾಹಕ ಸೂಚ್ಯಾಂಕ ಭತ್ಯೆ, ವಿಮೆ ಲೆಕ್ಕ ಹಾಕಿದರೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಶೌಚಾಲಯ ನಿರ್ಮಾಣದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೭೭ (೧೪೬೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಬಯಲು ಶೌಚಾಲಯ ಮುಕ್ತ ಗ್ರಾಮಗಳೆಂದು ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ ; (ಗ್ರಾಮವಾರು ವಿವರವಾದ ಮಾಹಿತಿ ನೀಡುವುದು)

(ಆ) ಪ್ರತಿ ಗ್ರಾಮ ಪಂಚಾಯಿತಿಗೆ ಶೌಚಾಲಯಗಳ ನಿರ್ಮಾಣಕ್ಕೆ ಒಂದೇ ತರಹದ ಖರ್ಚು ಇರುವುದರಿಂದ ಬೇರೆ ಬೇರೆ ಪ್ರವರ್ಗಗಳಿಗೆ ಬೇರೆ ಬೇರೆ ಸಹಾಯಧನ ನಿಗದಿಗೊಳಿಸಿರುವುದು ಸರಿಯೇ ;

(ಇ) ಪ್ರತಿ ಗ್ರಾಮದ ಮನೆಯ ಶೌಚಾಲಯಗಳಿಗೆ ಎಲ್ಲರಿಗೂ ಶೌಚಾಲಯ ನಿರ್ಮಾಣಕ್ಕೆ ನಿಗದಿತ ಪ್ರೋತ್ಸಾಹವನ್ನು ನೀಡಲು ಸರ್ಕಾರ ಮುಂದಾಗಿದೆಯೇ ? (ಮಾಹಿತಿ ನೀಡುವುದು)

## ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಂದ ಪಡೆಯುತ್ತಿರುವ ಬೋಧನಾ ಶುಲ್ಕ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೧೫೮ (೧೬೧೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ವಿಭಾಗಕ್ಕೆ ಪ್ರವೇಶ ಪಡೆಯುವಾಗ ಪ್ರತಿ ವಿದ್ಯಾರ್ಥಿಯಿಂದ ಎಷ್ಟು ಬೋಧನಾ ಶುಲ್ಕವನ್ನು ಪಡೆಯಲಾಗುತ್ತದೆ ; (ವಿವರ ನೀಡುವುದು)

(ಆ) ಈ ರೀತಿ ಪ್ರತಿ ವಿದ್ಯಾರ್ಥಿಯಿಂದ ಪಡೆದ ಬೋಧನಾ ಶುಲ್ಕದಲ್ಲಿ ಎಷ್ಟು ಪ್ರಮಾಣದ ಹಣವನ್ನು ಸರ್ಕಾರದ ಖಜಾನೆಗೆ ಅನುದಾನಿತ ಶಿಕ್ಷಣ ಸಂಸ್ಥೆಯವರು ಜಮಾ ಮಾಡುತ್ತಿದ್ದಾರೆ ;

(ಇ) ಈ ಹಿಂದೆ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರತಿ ವಿದ್ಯಾರ್ಥಿಯಿಂದ ಪಡೆದ ಬೋಧನಾ ಶುಲ್ಕದಲ್ಲಿ ಅರ್ಧದಷ್ಟು ಹಣವನ್ನು ಆಡಳಿತ ಮಂಡಳಿಯವರು ಉಳಿಸಿಕೊಂಡು, ಅದನ್ನು ಕಾಲೇಜು ಅಭಿವೃದ್ಧಿಗೆ ಉಪಯೋಗಿಸಿಕೊಳ್ಳುವ ವ್ಯವಸ್ಥೆ ಜಾರಿಯಲ್ಲಿರುವುದು ನಿಜವೇ ;

(ಈ) ಖಾಸಗಿ ಅನುದಾನಿತ ಆಡಳಿತ ಮಂಡಳಿಯವರು ಪ್ರತಿ ವಿದ್ಯಾರ್ಥಿಯಿಂದ ಪಡೆದ ಬೋಧನಾ ಶುಲ್ಕದಲ್ಲಿ ಅರ್ಧದಷ್ಟು ಹಣವನ್ನು ಆಡಳಿತ ಮಂಡಳಿಗಳು ಉಳಿಸಿಕೊಳ್ಳಲು ಸರ್ಕಾರದ ಅನುಮತಿ ಕೋರಿ ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ನೂತನ ಕೈಗಾರಿಕಾ ನೀತಿಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೫೯ (೧೬೦೦) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಸರ್ಕಾರದಿಂದ ನೂತನ ಕೈಗಾರಿಕಾ ನೀತಿಯನ್ನು ಪ್ರಕಟಿಸಲಾಗಿದೆಯೇ ; ಪ್ರಕಟಿಸಿದ್ದರೆ, ಅದರ ಮಾನದಂಡಗಳೇನು ;

(ಆ) ಕಳೆದ ೧೦ ವರ್ಷಗಳಿಂದ ಸತತವಾಗಿ ನಷ್ಟದಲ್ಲಿರುವ ರಾಜ್ಯ ಸರ್ಕಾರದ ಅಧೀನಕ್ಕೆ ಬರುವ ಬೃಹತ್ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಯಾವುವು ; ಇವುಗಳಿಂದ ಸರ್ಕಾರದ ಬೊಕ್ಕಸಕ್ಕೆ ಆದ ನಷ್ಟವೆಷ್ಟು ;

(ಇ) ಈ ರೀತಿ ನಷ್ಟದಲ್ಲಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರ ತೀರ್ಮಾನಿಸಿದೆಯೇ ?

## ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೬೦ (೧೩೯೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಹಾಗಿಲ್ಲದಿದ್ದಲ್ಲಿ, ಕಾರಣಗಳೇನು ; (ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಅಂತರ್ಜಲ ಕುಸಿತದಿಂದಾಗಿ ಗ್ರಾಮೀಣ ಪ್ರದೇಶದ ಜನರು ಫ್ಲೋರೈಡ್‌ಯುಕ್ತ ನೀರನ್ನು ಕುಡಿದು ಮಾರಣಾಂತಿಕ ಕಾಯಿಲೆಗಳಿಗೆ ತುತ್ತಾಗುತ್ತಿದ್ದು, ಪ್ರತಿ ಗ್ರಾಮಕ್ಕೆ ಒಂದು ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಜಾರಿಗೆ ತರಲಾಗುವುದು ? (ಮಾಹಿತಿ ನೀಡುವುದು)

## ಮಾಗಡಿ ತಾಲ್ಲೂಕಿನಲ್ಲಿ ಸರ್ಕಾರಿ ಜಮೀನಿನಲ್ಲಿ ಕಲ್ಲು ಗಣಿಗಾರಿಕೆ ಮಾಡುವ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೬೧ (೧೪೦೨) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕಿನಲ್ಲಿ ಸರ್ಕಾರಿ ಜಮೀನಿನಲ್ಲಿ ಪರವಾನಗಿ ಪಡೆದು ಕಲ್ಲು ಗಣಿಗಾರಿಕೆ ಮಾಡುತ್ತಿರುವವರ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಮಾಗಡಿ ತಾಲ್ಲೂಕಿನಲ್ಲಿ ಅನಧಿಕೃತವಾಗಿ ಕಲ್ಲು ಗಣಿಗಾರಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ವಿವರ ಒದಗಿಸುವುದು ; ಅನಧಿಕೃತವಾಗಿ ಗಣಿಗಾರಿಕೆ ನಡೆಸುತ್ತಿರುವವರ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಮಾಗಡಿ ತಾಲ್ಲೂಕಿನಲ್ಲಿ ಪರವಾನಗಿ ಪಡೆದು ಕಲ್ಲು ಗಣಿಗಾರಿಕೆಯಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು ; ಹಾಗೂ ಅನಧಿಕೃತ ಕಲ್ಲು ಗಣಿಗಾರಿಕೆಯಿಂದ ಆಗುತ್ತಿರುವ ನಷ್ಟವೆಷ್ಟು ? (ಪೂರ್ಣ ಮಾಹಿತಿಯನ್ನು ಒದಗಿಸುವುದು)

## ರಾಯಚೂರು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೬೨ (೧೪೯೪) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಜಿಲ್ಲೆಯಲ್ಲಿ ಪ್ರಸ್ತುತ ಇರುವ ಸಣ್ಣ ಕೈಗಾರಿಕೆಗಳ ಕೇಂದ್ರಗಳೆಷ್ಟು ; ಅವುಗಳನ್ನು ಅಭಿವೃದ್ಧಿ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು ?

## ಕರ್ನಾಟಕ ಅಲ್ಪಸಂಖ್ಯಾತರ ಇಲಾಖೆಯಲ್ಲಿ ವಿವಿಧ ಯೋಜನೆಗಳ ಅನುಷ್ಠಾನದ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೧೬೩ (೧೧೨೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಕರ್ನಾಟಕ ಅಲ್ಪಸಂಖ್ಯಾತರ ಇಲಾಖೆಯಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಲ್ಲಿ, ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು ;

(ಆ) ಈ ಪೈಕಿ ಖರ್ಚು ಮಾಡಿರುವ ಅನುದಾನ ಎಷ್ಟು ; (ಯೋಜನೆವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು)

(ಇ) ವರ್ಷಾವಾರು ಹಾಗೂ ಯೋಜನೆವಾರು ಮಂಜೂರಾಗಿರುವ ಅನುದಾನದಲ್ಲಿ ಖರ್ಚು ಮಾಡದೆ ಹಿಂದಿರುಗಿಸಿದ (ಸರೆಂಡರ್) ಅನುದಾನದ ಮೊತ್ತ ಎಷ್ಟು ;

(ಈ) ಅನುದಾನ ಹಿಂದಿರುಗಿಸಲು ಕಾರಣಗಳೇನು ; ತಪ್ಪಿತಸ್ಥ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮಕ್ಕಳ ಸುರಕ್ಷತಾ ನೀತಿ ಜಾರಿ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೬೪ (೧೫೨೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಮಕ್ಕಳ ಸುರಕ್ಷತೆ ಕುರಿತು ರಾಷ್ಟ್ರೀಯ ನೀತಿ ಆಯೋಗ ಹೊರಡಿಸಿರುವ ಮಾರ್ಗಸೂಚಿಯನ್ನು ಯಾವಾಗ ಹೊರಡಿಸಲಾಗಿದೆ ; ಈ ಮಾರ್ಗ ಸೂಚಿಯನ್ವಯ ರಾಜ್ಯ ಸರ್ಕಾರ ಜಾರಿಗೊಳಿಸಲು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಮಕ್ಕಳ ಸುರಕ್ಷತೆ ನೀತಿಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಶಿಕ್ಷಣ ಇಲಾಖೆಯು ಗೃಹ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯೊಂದಿಗೆ ಜಂಟಿಯಾಗಿ ಚರ್ಚಿಸಿ ನಿಯಮಗಳನ್ನು ಜಾರಿಗೊಳಿಸಿದೆಯೇ ; (ವಿವರ ನೀಡುವುದು)

(ಇ) ಮಕ್ಕಳ ಸುರಕ್ಷತಾ ನೀತಿ ಬಗ್ಗೆ ೨೦೧೬ರ ಏಪ್ರಿಲ್ ಮಾಹೆಯಲ್ಲಿ ನಡೆದ ಸಚಿವ ಸಂಪುಟದ ಸಭೆಯಲ್ಲಿ ಅನುಮೋದನೆಯಾಗಿದ್ದು, ಸಂಪುಟದ ಅನುಮೋದನೆಯನ್ನು ಜಾರಿಗೊಳಿಸಲಾಗಿದೆಯೇ ; (ವಿವರ ನೀಡುವುದು)

(ಈ) ಜಾರಿಗೊಳಿಸದಿದ್ದಲ್ಲಿ, ಯಾವ ಕಾರಣಕ್ಕಾಗಿ ಜಾರಿಗೊಳಿಸಿಲ್ಲ ; ಹಾಗೂ ವಿಳಂಬಕ್ಕೆ ಕಾರಣಗಳೇನು ? (ಪೂರ್ಣ ಮಾಹಿತಿಯನ್ನು ನೀಡುವುದು)

**ರಾಜ್ಯದ ವಕ್ಫ್ ಮಂಡಳಿಗೆ ನಕಲಿ ದಾಖಲೆ ನೀಡಿ ಕೋಟ್ಯಾಂತರ ಹಣ ವಂಚಿಸಿರುವ ಬಗ್ಗೆ**

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)** –

೧೬೫ (೧೪೨೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಕ್ಫ್ ಮಂಡಳಿಗೆ ನಕಲಿ ದಾಖಲೆ ನೀಡಿ ೪ ಕೋಟಿ ರೂಪಾಯಿಗಳ ವಂಚನೆ ಮಾಡಿರುವ ಪ್ರಕರಣ ನಡೆದಿದೆಯೇ ; ನಡೆದಿದ್ದಲ್ಲಿ, ಈ ಪ್ರಕರಣದ ವಿವರಗಳನ್ನು ನೀಡುವುದು)

(ಆ) ಈ ಪ್ರಕರಣದ ತನಿಖೆ ಈಗ ಯಾವ ಹಂತದಲ್ಲಿದೆ ; ವಂಚನೆ ಮಾಡಿದ ಹಣವನ್ನು ವಸೂಲು ಮಾಡಲಾಗಿದೆಯೇ ;

(ಇ) ಈ ಪ್ರಕರಣ ನಡೆಯಲು ಕಾರಣವಾದ ಅಧಿಕಾರಿಗಳು ಯಾರ್ಯಾರು ; ಅವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಇಂತಹ ಪ್ರಕರಣಗಳು ಮರುಕಳಿಸದಿರಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು. ಕಾ.ಸೂ. 1150 – 25